ಕರ್ನಾಟಕ ಸರ್ಕಾರ

# ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ ನಡವಳಿಗಳು

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕರ ನಿಯೋಜನೆಯನ್ನು ರದ್ದುಪಡಿಸುವ ಬಗ್ಗೆ.

*****

**ಪ್ರಸ್ತಾವನೆ:**

ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆಯನ್ನು ನಿಯಂತ್ರಿಸುವ ಸಲುವಾಗಿ ರೂಪಿಸಿರುವ ಕರ್ನಾಟಕ ನಾಗರೀಕ ಸೇವೆಗಳು (ಕಾಲೇಜು ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2021 ಮತ್ತು ತಿದ್ದುಪಡಿ ನಿಯಮಗಳಲ್ಲಿ ಕಲ್ಪಿಸಿರುವ ಅವಕಾಶಗಳಂತೆ 2022 ನೇ ಸಾಲಿನ ಕಾಲೇಜು ಶಿಕ್ಷಣ ಇಲಾಖೆಯ ಅರ್ಹ ಬೋಧಕರನ್ನು ಈ ಕಛೇರಿ ಆದೇಶ ಸಂಖ್ಯೆ:ಡಿಸಿಇ:ಟಿಆರ್‌ಆರ್: ಟಿಆರ್‌ಎನ್:5:2022-ಟಿಡಿಜಿ ದಿನಾಂಕ:29-04-2022ರಲ್ಲಿ (ಸಹ/ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು & ದೈಹಿಕ ಶಿಕ್ಷಣ ನಿರ್ದೇಶಕರು) ವರ್ಗಾವಣೆಗೊಳಸಿ ಆದೇಶಿಸಲಾಗಿರುತ್ತದೆ.

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ನಿಯೋಜನೆ/ಅನ್ಯ ಕಾರ್ಯ ನಿಮಿತ್ತ ಕರ್ತವ್ಯ ನಿರ್ವಹಿಸುತ್ತಿರುವ ಸಹ/ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಹಾಗೂ ದೈಹಿಕ ಶಿಕ್ಷಣ ನಿರ್ದೇಶಕರ ಮಾತೃ ಕಾಲೇಜುಗಳ ಶೈಕ್ಷಣಿಕ ಮತ್ತು ಆಡಳಿತಾತ್ಮಕ ಹಿತದೃಷ್ಟಿಯಿಂದ ಸದರಿ ನಿಯೋಜನೆ/ಅನ್ಯ ಕಾರ್ಯ ನಿಮಿತ್ತ ನಿಯೋಜನೆಯನ್ನು ರದ್ದುಪಡಿಸಿ ಮಾತೃ ಕಾಲೇಜುಗಳಿಗೆ ಹಿಂದಿರುಗಿಸಲು ಈ ಆದೇಶ.

**ಆದೇಶ ಸಂಖ್ಯೆ:ಕಾಶಿಇ:07:ನಿಯೋಜನೆ ರದ್ದು:2022:ವ&ನಿ, ಬೆಂಗಳೂರು, ದಿನಾಂಕ:30.04.2022**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಈ ಕಛೇರಿಯ ವಿವಿಧ ಆದೇಶಗಳ ಮೇರೆಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ನಿಯೋಜನೆ/ಅನ್ಯ ಕಾರ್ಯ ನಿಮಿತ್ತ ಕರ್ತವ್ಯ ನಿರ್ವಹಿಸುತ್ತಿರುವ (ಖಾಸಗಿ ಅನುದಾನಿತ ಕಾಲೇಜುಗಳಿಂದ ಮರುಹಂಚಿಕೆಗೊಂಡಿರುವ ಬೋಧಕರನ್ನು ಹೊರತುಪಡಿಸಿ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಹ/ಸಹಾಯಕ ಪ್ರಾಧ್ಯಾಪಕರು, ಗ್ರಂಥಪಾಲಕರು ಹಾಗೂ ದೈಹಿಕ ಶಿಕ್ಷಣ ನಿರ್ದೇಶಕರ ನಿಯೋಜನೆ/ಅನ್ಯ ಕಾರ್ಯ ನಿಮಿತ್ತ ನಿಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ. ಹಾಗೂ ದಿನಾಂಕ:04-05-2022 ರ ಅಪರಾಹ್ನದಿಂದ ಅನ್ವಯಿಸುವಂತೆ ನಿಯೋಜಿತ ಕಾಲೇಜಿನ ಕರ್ತವ್ಯದಿಂದ ಬಿಡುಗಡೆಗೊಳಸಿ ಮಾತೃ ಕಾಲೇಜುಗಳಿಗೆ ಹಿಂದಿರುಗಿಸಿ ಆದೇಶಿಸಲಾಗಿದೆ.

*(ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)*

30/04/2022

ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

**ಇವರಿಗೆ:**

1. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ
2. ಇಲಾಖಾ ವ್ಯಾಪ್ತಿಯ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ
3. ಸಂಬಂಧಪಟ್ಟ ಸಹ/ಸಹಾಯಕ ಪ್ರಾಧ್ಯಾಪಕರು/ಗ್ರಂಥಪಾಲರು/ದೈಹಿಕ ಶಿಕ್ಷಣ ನಿರ್ದೇಶಕರುಗಳಿಗೆ

ಪ್ರತಿಯನ್ನು-ಮಾಹಿತಿಗಾಗಿ

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
3. ಕಛೇರಿ ಪ್ರತಿ.

*DCE 7 Depu Cancel order All proceedings*

Scanned with CamScanner